**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು**
**ಸಿ.ಸಿ.ನಂ.2133/2023.**
**ದಿನಾಂಕಃ20.03.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು**

| | | |
|---|---|---|
| ಸಾಕ್ಷಿಯ ಹೆಸರು | ರಾಮು | ಚಾಸಾ3, ಪ್ರಾಸ-3 |
| ತಂದೆಯ ಹೆಸರು | ದೊಡ್ಡ ಮಲ್ಲಪ್ಪ | |
| ವಯಸ್ಸು | 65 ವರ್ಷ | |
| ಉದ್ಯೋಗ | ಕೂಲಿ ಕೆಲಸ | |
| ವಾಸ | ಚಿಕ್ಕಬಾಸೂರು ಗ್ರಾಮ | |

**ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದಃ-**

ಚಾಸಾ 1, 2 ಮತ್ತು ಆರೋಪಿತರು ನನಗೆ ಪರಿಚಯವಿರುತ್ತಾರೆ. ಸಾಕ್ಷಿಯು ಈಗಾಗಲೇ ಗುರುತಿಸಿರುವ ನಿಪಿ 3 ಪೊಲೀಸ್ ನೋಟೀಸ್ ನಲ್ಲಿನ ತನ್ನ ಹೆಬ್ಬೆಟ್ಟಿನ ಗುರುತು ನೋಡಿ ಗುರುತಿಸಿರುತ್ತಾರೆ. ಅದೇ ರೀತಿ ಸಾಕ್ಷಿಯು ಈಗಾಗಲೇ ಗುರುತಿಸಿರುವ ನಿಪಿ 2 ಮಹಜರಿನಲ್ಲಿನ ತನ್ನ ಹೆಬ್ಬೆಟ್ಟಿನ ಗುರುತು ನೋಡಿ ಗುರುತಿಸಿರುತ್ತಾರೆ. ಸದರಿ ಹೆಬ್ಬೆಟ್ಟು ರುಜುವನ್ನು ಸುಮಾರು 1 ವರ್ಷದ ಹಿಂದೆ ಚಿಕ್ಕಬಾಸೂರಿನ ಪುಟ್ಟಪ್ಪ ರವರ ಮನೆ ಬಳಿ ಚಾಸಾ 1 ಮತ್ತು 1 ರಿಂದ 3 ನೇ ಆರೋಪಿತರ ನಡುವೆ ಗಲಾಟೆಯಾದ ವಿಚಾರವಾಗಿ ಪೊಲೀಸರು ಮಹಜರಿಗೆಂದು ಬಂದ ಸಮಯದಲ್ಲಿ ಸುಮಾರು ಸಂಜೆ 5 ರಿಂದ 5.30 ರ ತನಕ ಪೊಲೀಸರು ಮಹಜರ್ ಮಾಡಿ ನನ್ನ ಹೆಬ್ಬೆಟ್ಟಿನ ಗುರುತು ಪಡೆದಿರುತ್ತಾರೆ. ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ವಸ್ತು ಅಮಾನತ್ತು ಪಡಿಸಿಕೊಂಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಭಾಗಶಃ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಭಾಗಶ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿಃ20.04.2023 ರಂದು ಸಂಜೆ 6 ಗಂಟೆ ಸಮಯದಲ್ಲಿ 1 ರಿಂದ 3 ನೇ ಆರೋಪಿತರು ಮತ್ತು ಚಾಸಾ 1 ರವರ ನಡುವೆ ಗಲಾಟೆಯಾದ ವಿಚಾರವಾಗಿ

ಪೊಲೀಸರು ಮಹಜರಿಗೆ ಬನ್ನಿ ಎಂದು ನನಗೆ ಮತ್ತು ಚಾಸಾ 2 ರವರಿಗೆ ನಿಪಿ3 ರಂತೆ ನೋಟೀಸು ನೀಡಿರುತ್ತಾರೆ ಎಂದರೆ ಸರಿ. ಅದರಂತೆ ಪೊಲೀಸರು ದಿಃ27.04.2023 ರಂದು ಸಂಜೆ 5 ಗಂಟೆಗೆ ಸಳ್ಥಕ್ಕೆ ಬಂದು ಚಾಸಾ 1 ರವರು ತೋರಿಸಿದ ಸ್ಥಳದಲ್ಲಿ ನನ್ನ ಮತ್ತು 2 ರವರ ಸಮಕ್ಷಮ 5.30 ತನಕ ಮಹಜರ್ ಮಾಡಿ ಮು ಮಾ 1 ಕೋಲನ್ನು ವಶಪಡಿಸಿಕೊಂಡರು ಎಂದರೆ ಸಾಕ್ಷಿಯು ಮಹಜರ್ ಮಾಡಿರುತ್ತಾರೆ, ಕೋಲನ್ನು ನಾನು ನೋಡಿರುವುದಿಲ್ಲ. ನಿಪಿ 2 ರಲ್ಲಿ ಬರೆದಿರುವ ವಿಚಾರಗಳನ್ನು ಪೊಲೀಸರು ನನಗೆ ಓದಿ ಹೇಳಿದ ನಂತರ ನಾನು ನನ್ನ ಹೆಬ್ಬೆಟ್ಟಿನ ರುಜು ಮಾಡಿರುತ್ತೇನೆ ಎಂದರೆ ಸರಿ.

<u>ಪಾಟೀಸವಾಲುಃ</u> ಆರೋಪಿತರ ಪರ ಶ್ರೀ ಜಿ ಹೆಚ್ ಕೆ ವಕೀಲರಿಂದ ಶ್ರೀ ಎಂ ಜಿ ವಕೀಲ ಪರವಾಗಿಃ-

ನಾನು ಪೊಲೀಸರ ಕೋರಿಕೆಯಂತೆ ಸಹಿ ಮಾಡಿರುತ್ತೇನೆ ಎಂದರೆ ಸರಿ. ನಿಪಿ 2 ರಲ್ಲಿ ಬರೆದಿರುವ ವಿಚಾರ ಪೊಲೀಸರು ನನಗೆ ಓದಿ ಹೇಳಿರುವುದಿಲ್ಲ ಎಂದರೆ ಸರಿ. ನಿಪಿ 2 ರಲ್ಲಿನ ಹೆಬ್ಬೆಟ್ಟಿನ ಗುರುತು ನನ್ನದ್ದಲ್ಲ ಎಂದರೆ ಸರಿಯಲ್ಲ. ಘಟನಾ ಸ್ಥಳದ ಚೆಕ್ಕುಬಂಧಿ ನನಗೆ ಹೇಳಲಾಗುವುದಿಲ್ಲ, ನನಗೆ ಅದು ಗೊತ್ತಾಗುವುದಿಲ್ಲ. ನಾನು ಮಹಜರ್ ಕಾಲದಲ್ಲಿ ಇರದಿದ್ದರೂ ಸಹಃ ಚಾಸಾ 1 ಮತ್ತು ಪೊಲೀಸರ ಮಾತು ಕೇಳಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಚಾಸಾ 1 ನನ್ನ ಅಣ್ಣ. ಚಾಸಾ 1 ನನ್ನ ಅಣ್ಣನಾದ್ದರಿಂದ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತಿದ್ದೇನೆ ಎಂದರೆ ಸರಿಯಲ್ಲ. ಪೊಲೀಸರು ನನಗೆ ನೋಟೀಸು ನೀಡಿಲ್ಲ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ, ನಾನು ನಿಪಿ 2 ಕ್ಕೆ ಠಾಣೆಯಲ್ಲಿ ಹೆಬ್ಬೆಟ್ಟಿನ ಗುರುತು ಮಾಡಿರುತ್ತೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆ : ಇಲ್ಲ</u>

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ ಒ,

ಸಹಿ/-
1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ:ದಃನ್ಯಾಃದಂ.,ರವರು, ಕಡೂರು